# ಬದಲಿ ಬೆಳೆಯ ಬಗ್ಗೆ ಈಗಲೇ ಚಿಂತಿಸಿ

## ಸುಸ್ಥಿರ ಬೇಸಾಯ ಕ್ರಮಗಳು ಕಾರ್ಯಾಗಾರದಲ್ಲಿ ಶಾಸಕ ಹೆಬ್ಬಾರ ಸಲಹೆ

**ಶಿರಸಿ:** ಮಲೆನಾಡಿನ ರೈತರು ಅಡಕೆ ಬೆಳೆಯ ಬದಲಿ ಬೆಳೆಯ ಬಗ್ಗೆ ಸಹ ಈಗಲೇ ಚಿಂತನೆ ನಡೆಸ ಬೇಕಿದೆ ಎಂದು ಶಾಸಕ ಶಿವರಾಮ ಹೆಬ್ಬಾರ ಹೇಳಿದರು.

ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆಯ ಸಹಕಾರದಲ್ಲಿ ಇಲ್ಲಿಯ ಟಿಆರ್‌ ಸಿ ಸಭಾಭವನದಲ್ಲಿ ಶನಿವಾರ ಆಯೋಜಿಸಲಾಗಿದ್ದ ಅಡಕೆ ಹಾಗೂ ಕಾಳು ಮೆಣಸಿನಲ್ಲಿ ರೋಗ ಮತ್ತು ಕೀಟ ನಿರ್ವಹಣೆಗೆ ಸುಸ್ಥಿರ ಬೇಸಾಯ ಕ್ರಮಗಳು ಹಾಗೂ ಉಪ ಬೆಳೆಗಳ ಕುರಿತ ಮಾಹಿತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರೈತರಲ್ಲಿರುವ ಕೃಷಿ ಜ್ಞಾನ ಕೃಷಿ ವಿಜ್ಞಾನಿಗಳಿಗೂ ತಲುಪಬೇಕು. ಬೆಳೆಗಳಿಗೆ ಯೋಗ್ಯ ಬೆಲೆ ಸಿಕ್ಕರೆ ರೈತರೂ ಸಾಲ ಮನ್ನಾ ಬಗ್ಗೆ ಆಗ್ರಹಿಸುವುದಿಲ್ಲ. ಅಡಕೆ ಬೆಳೆಗಾರರಿಗೆ ಈ ವರ್ಷ ಕಷ್ಟದ ಕಾಲ. ಅತಿ ಮಳೆಯಿಂದ ಅಡಕೆ ಬೆಳೆಗಾರರು ಕಷ್ಟಕ್ಕೆ ಬಿದ್ದಿದ್ದಾರೆ. ಆಂಧ್ರ, ತಮಿಳುನಾಡಿನಲ್ಲಿ 46 ಸಾವಿರ ಹೆಕ್ಟೇರ್ ಪ್ರತಿ ರಾಜ್ಯದಲ್ಲಿ ಬೆಳೆಯುತ್ತಿದ್ದು, ಇನ್ನೆರಡು ವರ್ಷಗಳಲ್ಲಿ ಫಸಲು ಬರಲಿದೆ. ಹಾವೇರಿ, ಶಿಗ್ಗಾಂವಿ ನಂತಹ ತಾಲೂಕುಗಳೂ ಶಿರಸಿಯನ್ನು ಮೀರಿಸುವ ಮಟ್ಟದಲ್ಲಿ ಬೆಳೆಯಲಿವೆ. ಹೀಗಾಗಿ, ಬದಲಿ ಬೆಳೆ ಅನಿವಾರ್ಯ ಎಂದರು.

ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿ, ಅಡಕೆ ಬೆಳೆಗಾರರು ಇಂದು ವಿವಿಧ ರೀತಿಯ ಸಂಕಷ್ಟದಲ್ಲಿದ್ದಾರೆ. ಸರ್ಕಾರ ಅಡಕೆ ಬೆಳೆಗಾರರ ನೆರವಿಗೆ ಬರುವಂತೆ ಜನಾಭಿಪ್ರಾಯ ರೂಪಿಸುವ ಮೂಲಕ ಒತ್ತಡ ತರಬೇಕಾದ ಅಗತ್ಯತೆ ಇದಿದೆ. ರಾಜ್ಯ ಸರ್ಕಾರ ಈ ಸಂದರ್ಭದಲ್ಲಿ ಅಡಕೆ ಬೆಳೆಗಾರರ ನೆರವಿಗೆ ಬರಲೇಬೇಕಿದೆ. ಕೇವಲ ರಾಜ್ಯ ಸರ್ಕಾರ ದಿಂದ ಮಾತ್ರ ಸಾಧ್ಯವಾಗಿದ್ದರೆ ಕೇಂದ್ರಕ್ಕೆ ಅಡಕೆ ಬೆಳೆಗಾರರ ಪರವಾಗಿ ಶಿಫಾರಸು ಮಾಡಲಿ, ಅಡಕೆ ಬೆಳೆವ ಕ್ಷೇತ್ರಗಳ ಸಂಸದರು ನಾವು ಸಂಸತ್‌ನಲ್ಲಿ ಅಡಕೆ ಬೆಳೆಗಾರರ ಪರವಾಗಿ ಮಾತನಾಡಲಿದ್ದೇವೆ ಎಂದರು.

ಉತ್ತರ ಕನ್ನಡ ಜಿಲ್ಲೆ ಸಹಕಾರಿ ಕ್ಷೇತ್ರಕ್ಕೆ ಜಿಲ್ಲೆ ಹೆಸರಾಗಿದೆ. ಅಡಕೆ ಬೆಳೆಗಾರರ ನೆರವಿಗೆ ಬರಲು ಜಿಲ್ಲೆಯಲ್ಲಿ ಸಹಕಾರಿ ಸಂಘಗಳು, ರೈತ ಸಮುದಾಯ ಕೃಷಿ ಕುರಿತ ಚಿಂತನ ನಡೆಸುತ್ತಿವೆ. ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಯತ್ನವೂ ಆಗುತ್ತದೆ. ಆದರೆ, ಈಗ ಎದುರಿಸುತ್ತಿರುವ ಸಮಸ್ಯೆ ಸ್ಥಳೀಯ ಸಹಕಾರಿ ಸಂಘಗಳಿಂದ ಮಾತ್ರ ಪರಿಹಾರ ಸಾಧ್ಯವಾಗುವುದಿಲ್ಲ. ಅಡಕೆ ಬೆಳೆ ಮುಂದೆ ಅನೇಕ ಸವಾಲುಗಳಿವೆ. ಅಡಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಆರೋಪ ಇರುವುದರಿಂದ ಈ ತೊಡಕನ್ನು ಮೊದಲು ನಿವಾರಿಸಬೇಕಿದೆ. ಅಡಕೆ ಆರೋಗ್ಯಕ್ಕೆ ಹಾನಿಕಾರಕ ಅಲ್ಲ ಎಂಬ ಅಂಶವನ್ನು ವಿಶ್ವ ಆರೋಗ್ಯ ಸಂಸ್ಥೆಗೂ ಮನವರಿಕೆ ಮಾಡಿಕೊಡಬೇಕಿದೆ. ಹೀಗಾಗಿ, ಅಡಕೆ ಆರೋಗ್ಯಕ್ಕೆ ಹಾನಿಕಾರಕ ಅಲ್ಲ ಎಂಬುದನ್ನು ದೃಢಪಡಿಸುವ ಸಂಶೋಧನೆಗಾಗಿ ಕೇಂದ್ರ ಸರ್ಕಾರ 10 ಕೋಟಿ ರೂ. ನೆರವು ನೀಡಿದೆ ಎಂದರು.



ಶಿರಸಿಯ ಟಿಆರ್‌ಸಿ ಸಭಾಭವನದಲ್ಲಿ ಶನಿವಾರ ಆಯೋಜಿಸಲಾಗಿದ್ದ ಸುಸ್ಥಿರ ಬೇಸಾಯ ಕ್ರಮಗಳು ಕಾರ್ಯಾಗಾರವನ್ನು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಉದ್ಘಾಟಿಸಿದರು. ಶಾಸಕ ಶಿವರಾಮ ಹೆಬ್ಬಾರ, ಟಿಎಸ್‌ಎಸ್ ಅಧ್ಯಕ್ಷ ಗೋಪಾಲಕೃಷ್ಣ ವೈದ್ಯ, ಟಿಎಂಎಸ್ ಅಧ್ಯಕ್ಷ ಜಿ.ಟಿ.ಹೆಗಡೆ, ಟಿ.ಆರ್.ಸಿ ಅಧ್ಯಕ್ಷ ರಾಮ ಕೃಷ್ಣ ಹೆಗಡೆ ಕಡವೆ, ಶಂಭುಲಿಂಗ ಹೆಗಡೆ, ಇತರರು ಇದ್ದರು.

### ಅಡಕೆ ಅಕ್ರಮ ಪ್ರವೇಶದ ಸಮಸ್ಯೆ

**ಅಡಕೆಯ ಅಕ್ರಮ ಆಮದೂ ಸಹ ಮಾರುಕಟ್ಟೆ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಅಡಕೆ ಆಮದಿನ ಮೇಲೆ ಕೇಂದ್ರ ಸರ್ಕಾರ ಶೇ. 350ರಷ್ಟು ತೆರಿಗೆ ವಿಧಿಸಿದ್ದರೂ, ಅಕ್ರಮವಾಗಿ ದೇಶದೊಳಗೆ ತರುತ್ತಿರುವುದು ಸಮಸ್ಯೆ ಆಗಿದೆ. ಕೇಂದ್ರ ಸರ್ಕಾರ ಗಡಿ ಬಿಗಿಗೊಳಿಸಿ, ಅಕ್ರಮ ಸಾಗಾಟ ನಿಯಂತ್ರಿಸಲು ಯತ್ನಿಸಿದ್ದರೂ ಶಿರಸಿ ಮಾರುಕಟ್ಟೆಯವರೆಗೂ ವಿದೇಶಿ ಅಡಕೆ ಬರುತ್ತಿದೆ. ಇದರ ನಿಯಂತ್ರಣ ಸವಾಲಿನ ವಿಷಯ. ರಾಜ್ಯ, ಕೇಂದ್ರ ಸೇರಿ ಹೇಗೆ ನಿಯಂತ್ರಣ ಮಾಡಬಹುದು ಎಂಬ ಬಗ್ಗೆ ಚಿಂತಿಸಬೇಕಿದೆ. ಅದೇ ರೀತಿ ಅಡಕೆ ಕೃಷಿಯಲ್ಲೂ ಯಂತ್ರೋಪಕರಣಗಳ ಇನ್ನಷ್ಟು ಶೋಧನೆ ನಡೆಸಿ ಖರ್ಚನ್ನೂ ಕಡಿಮೆಗೊಳಿಸಬೇಕಾಗಿದೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.**

ಸಿಪಿಸಿಆರ್ಐ ನಿರ್ದೇಶಕ ಬಾಲಚಂದ್ರ ಹೆಬ್ಬಾರ್ ಪ್ರಾಸ್ತಾವಿಕ ಮಾತನಾಡಿ, ಅಡಕೆಯಲ್ಲಿ ಕುಬ್ಜ ತಳಿ ಸಂಶೋಧನೆ ಆಗಿದ್ದರೂ ನಿರೀಕ್ಷಿತ ಫಸಲು ಇರಲಿಲ್ಲ. ಪ್ಲಾಂಟೇಶನ್ ಕ್ರಾಪ್ ಗಳೂ ಹವಾಮಾನ ವೈಪರೀತ್ಯದಿಂದಾಗಿ ಕೆಲ ರೋಗ ತಿಳಿಯುವುದಕ್ಕೂ ಮುನ್ನವೇ ವೇಗವಾಗಿ ಹಬ್ಬುತ್ತಿದೆ. ಎಲೆಚುಕ್ಕಿ ರೋಗ ಇದೇ ಮಾದರಿಯಲ್ಲಿ ಹಬ್ಬಿದೆ. ಎಲೆ ಚುಕ್ಕಿ ನಿಯಂತ್ರಣಕ್ಕೆ ನಾವು ತೋಟವನ್ನು ಯಾವ ರೀತಿ ನಿರ್ವಹಣೆ ಮಾಡಬೇಕು ಎಂಬುದೂ ಮುಖ್ಯವಾಗುತ್ತದೆ. 25 ಡಿಗ್ರೀ ತಾಪಮಾನ, ಶೇ.75 ಕ್ಕಿಂತ ಜಾಸ್ತಿ ಆರ್ದತೆ ಇದ್ದ ವಾತಾವರಣದಲ್ಲಿ ಎಲೆ ಚುಕ್ಕಿ ಜಾಸ್ತಿ ಪ್ರಸಾರವಾಗಿದೆ. ಹೊಸ ಎಲೆ ಜಾಸ್ತಿ ಬರುವಂತೆ ಮತ್ತು ಎಲೆ ಚುಕ್ಕಿ ಹೊಸ ಎಲೆಗೆ ಹಬ್ಬದಂತೆ ನೋಡಿಕೊಳ್ಳಬೇಕು. ಚೈನೀಸ್ ರಿಂಗ್ ಸ್ಪಾಟ್ ವೈರಸ್ ಉತ್ತರಕನ್ನಡ, ಬೆಳ್ತಂಗಡಿಯಲ್ಲೂ ಕಾಣಿಸಿಕೊಂಡಿದೆ. ಈ ವೈರಸ್ ಬಗ್ಗೆ ಇನ್ನಷ್ಟು ಶೋಧ ಆಗಬೇಕು. ಹರಡುವಿಕೆಯ ಕೀಟ ಯಾವುದು ಎಂಬುದನ್ನು ಶೋಧ ಮಾಡುತ್ತಿದ್ದೇವೆ. ಅಡಕೆ ಆರೋಗ್ಯಕ್ಕೆ ಹಾನಿಕಾರಕ ಎಂಬ ಆರೋಪ ಸದಾ ಕೇಳಿಬರುತ್ತಿದೆ. ಬೇರೆ ವಸ್ತುಗಳ ಜೊತೆ ಮಿಶ್ರಣ ಮಾಡಿ ಅಡಕೆ ಬಳಸುವುದರಿಂದ ಆರೋಗ್ಯ ಸಮಸ್ಯೆ ಉಂಟಾಗಿದೆ ಹೊರತೂ ಅಡಕನ್ನಷ್ಟೇ ಬಳಸಿದವರು ಆರೋಗ್ಯವಾಗಿದ್ದಾರೆ. ಈ ಕುರಿತೂ ಸಂಶೋಧನೆ ನಡೆಸಲಿದ್ದೇವೆ ಎಂದರು.

ಟಿಎಸ್‌ಎಸ್ ಅಧ್ಯಕ್ಷ ಗೋಪಾಲಕೃಷ್ಣ ವೈದ್ಯ, ಟಿಎಂಎಸ್ ಅಧ್ಯಕ್ಷ ಜಿ.ಟಿ.ಹೆಗಡೆ, ಟಿ.ಆರ್.ಸಿ ಅಧ್ಯಕ್ಷ ರಾಮಕೃಷ್ಣ ಹೆಗಡೆ ಕಡವೆ, ಸಾಂಬಾರು ಮಂಡಳಿ ಉಪನಿರ್ದೇಶಕ ಬಾಬುಲಾಲ್ ಮೀನಾ, ಶಂಭುಲಿಂಗ ಹೆಗಡೆ, ಸತೀಶ ಹೆಗಡೆ, ರೂಪಾ ಪಾಟೀಲ ಇತರರು ಇದ್ದರು.